ಕರ್ನಾಟಕ ವಿಧಾನಸಭೆ

(ಹದಿನಾಲ್ಕನೇ ವಿಧಾನಸಭೆ)

ಹದಿಮೂರನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಮಂಗಳವಾರ, ದಿನಾಂಕ 07ನೇ ಫೆಬ್ರವರಿ, 2017
(ಸಮಯ: ಬೆಳಿಗ್ಗೆ 10.30 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು	:	ಮೊದಲನೇ ಪಟ್ಟಿ
ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು	:	ಮೊದಲನೇ ಪಟ್ಟಿ

2. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಸದಸ್ಯರಿಗೆ ಪ್ರತ್ಯೇಕವಾಗಿ ಕಳುಹಿಸಲಾಗಿರುವ ಮೊದಲನೇ ಹಾಗೂ ಎರಡನೇ ಪಟ್ಟಿಯ ರೀತ್ಯ.

3. ವರದಿಯನ್ನೊಪ್ಪಿಸುವುದು

ಶ್ರೀ ಎನ್.ಎ. ಹ್ಯಾರಿಸ್ (ಅಧ್ಯಕ್ಷರು, ಕ್ಲಬ್ ಸದನ ಸಮಿತಿ) ಅವರು – ಬೆಂಗಳೂರು ನಗರ ಒಳಗೊಂಡಂತೆ ರಾಜ್ಯದಲ್ಲಿರುವ ಕ್ಲಬ್‌ಗಳ ಕಾರ್ಯಚಟುವಟಿಕೆಗಳು ಮತ್ತು ನಿಯಂತ್ರಣದ ಬಗ್ಗೆ ಅಧ್ಯಯನ ಮಾಡಲು ರಚನೆ ಮಾಡಲಾಗಿದ್ದ ಸದನ ಸಮಿತಿಯ ವರದಿಯನ್ನು ಒಪ್ಪಿಸುವುದು.

4. ಅರ್ಜಿಗಳನ್ನೊಪ್ಪಿಸುವುದು

ಶ್ರೀ ಎನ್.ಹೆಚ್. ಶಿವಶಂಕರರೆಡ್ಡಿ (ಮಾನ್ಯ ಉಪ ಸಭಾಧ್ಯಕ್ಷರು ಹಾಗೂ ಅಧ್ಯಕ್ಷರು, ಅರ್ಜಿಗಳ ಸಮಿತಿ) ಅವರು ಈ ಕೆಳಕಂಡ ಅರ್ಜಿಗಳನ್ನು ಒಪ್ಪಿಸುವುದು.

1. ಕೋಲಾರ ಜಿಲ್ಲೆ ವಕ್ಕಲೇರಿ ಹೋಬಳಿ ಚಲುವನ ಹಳ್ಳಿ ಗ್ರಾಮದ ಸರ್ವೆ ನಂ. 10ರಲ್ಲಿನ ಸರ್ಕಾರಿ ಜಮೀನನ್ನು (ಗೋಮಾಳ) ಸಕ್ರಮಗೊಳಿಸಿಕೊಡುವ ಬಗ್ಗೆ.

–2–

2. ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಕಿರಿಯ ಮಹಿಳಾ ಆರೋಗ್ಯ ಸಹಾಯಕರ ಸೇವೆಯನ್ನು ಖಾಯಂಗೊಳಿಸುವ ಬಗ್ಗೆ.

3. ಹೊಸಕೋಟೆ ತಾಲ್ಲೂಕು, ಸೂಲಿಬೆಲೆ ಹೋಬಳಿ, ಶಾಂತನಪುರ ಗ್ರಾಮದ ಸರ್ವೆ ನಂ.9ರಲ್ಲಿ 261 ಎಕರೆ ಜಮೀನು ಅಕ್ರಮವಾಗಿ ಭೂ ಮಂಜೂರಾತಿಯಾಗಿರುವುದನ್ನು ರದ್ದುಪಡಿಸಿ ತಪ್ಪಿತಸ್ಥ ಅಧಿಕಾರಿಗಳ ಮೇಲೆ ಶಿಸ್ತು ಕ್ರಮ ಜರುಗಿಸುವ ಬಗ್ಗೆ.

4. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ PMGSY ಮತ್ತು ನಮ್ಮ ಗ್ರಾಮ ನಮ್ಮ ರಸ್ತೆ ಯೋಜನೆಯಡಿ 2013ರಿಂದ ಇಲ್ಲಿಯವರೆವಿಗೂ ರಸ್ತೆ ಕಾಮಗಾರಿ ಮಾಡಿರುವ ಮತ್ತು ಮಾಡದೇ ಇರುವ ರಸ್ತೆಗಳ ಸ್ಥಿತಿ ಬಗ್ಗೆ.

5. ಬೆಂಗಳೂರು ಪೂರ್ವ ತಾಲ್ಲೂಕು, ಕೆ.ಆರ್. ಪುರಂ ಹೋಬಳಿ, ಥಣಿಸಂದ್ರ ಗ್ರಾಮದ ಸರ್ವೆ ನಂ. 17/5 ರಲ್ಲಿರುವ 02 ಎಕರೆ ಜಮೀನಿಗೆ ಸಂಬಂಧಿಸಿದಂತೆ ಭೂ ಸ್ವಾಧೀನ ಪ್ರಕ್ರಿಯೆಯಿಂದ ಕೈಬಿಡುವ ಬಗ್ಗೆ.

6. ಕುಣಿಗಲ್ ಪಟ್ಟಣದಲ್ಲಿ ಒಳಚರಂಡಿ ಯೋಜನೆಯಡಿ ಕೊಳಚೆ ನೀರಿನ ಸಂಸ್ಕರಣ ಘಟಕದ ನಿರ್ಮಾಣಕ್ಕಾಗಿ ಕುಣಿಗಲ್ ಸ್ಟಡ್ ಫಾರಂ ಬೇಗೂರು ಅಮಾನಿಕೆರೆ ಗ್ರಾಮದ ಸರ್ವೆ ನಂ. 129ರಲ್ಲಿ 7.00 ಎಕರೆ ಜಮೀನನ್ನು ಪುರಸಭೆಗೆ ಹಸ್ತಾಂತರಿಸುವ ಬಗ್ಗೆ.

5. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

"2017ರ ಫೆಬ್ರವರಿ 06 ರಂದು ವಿಧಾನ ಮಂಡಲದ ಉಭಯ ಸದನಗಳ ಸದಸ್ಯರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನಸಭೆಯ ಸದಸ್ಯರಾದ ನಾವು ಮಾನ್ಯ ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ." ಎಂದು

ಶ್ರೀ ಕೆ.ಎನ್. ರಾಜಣ್ಣ ಅವರು ಸೂಚಿಸುವುದು.

ಡಾ॥ ಕೆ. ಸುಧಾಕರ್ ಅವರು ಅನುಮೋದಿಸುವುದು.

6. ಗಮನ ಸೆಳೆಯುವ ಸೂಚನೆಗಳು

1. **ಶ್ರೀ ಹೆಚ್.ಸಿ. ಬಾಲಕೃಷ್ಣ** ಇವರು – ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ವಾಣಿಜ್ಯ ಶಾಸ್ತ್ರದ ಉಪನ್ಯಾಸಕರ ಹುದ್ದೆ ಮಂಜೂರು ಮಾಡುವುದು ಹಾಗೂ ಅತಿಥಿ ಉಪನ್ಯಾಸಕರಿಗೆ ವೇತನ ಪಾವತಿ ಮಾಡದೆ ಇರುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

2. **ಶ್ರೀ ಎನ್.ಎ.ಹ್ಯಾರಿಸ್** ಇವರು – ಬೆಂಗಳೂರು ಮಹಾನಗರ ಮತ್ತು ರಾಜ್ಯಾದ್ಯಂತ ಸ್ಥಾಪಿಸಲಾಗಿರುವ ಮೊಬೈಲ್ ಟವರ್‌ಗಳಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರ ಗಮನ ಸೆಳೆಯುವುದು.

3. **ಶ್ರೀ ಮಾನಪ್ಪ ಡಿ. ವಜ್ಜಲ್** ಇವರು – ಅಖಿಲ ಕರ್ನಾಟಕ ಹಡಪದ ಸಮಾಜದವರಿಗೆ ಸರ್ಕಾರವು ನೀಡಿರುವ ಕೊಡುಗೆ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

4. **ಶ್ರೀಮತಿ ಜೊಲ್ಲೆ ಶಶಿಕಲಾ ಅಣ್ಣಾ ಸಾಹೇಬ** ಇವರು – ನಿಪ್ಪಾಣಿ ನಗರ ಸಭೆಯ ವ್ಯಾಪ್ತಿಯಲ್ಲಿ ಬರುವ ವಿವಿಧ ವಾರ್ಡ್‌ಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಸ್ಥಳೀಯ ಶಾಸಕರ ಕ್ರಿಯಾಯೋಜನೆಯನ್ನು ಪರಿಗಣಿಸುವ ಬಗ್ಗೆ ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರ ಗಮನ ಸೆಳೆಯುವುದು.

5. **ಶ್ರೀ ಕೆ.ಜಿ. ಬೋಪಯ್ಯ** ಇವರು – ಕಂದಾಯ ಇಲಾಖೆಯಿಂದ ಅರಣ್ಯ ಇಲಾಖೆಗೆ ಹಸ್ತಾಂತರಿಸಿದ 'ಸಿ' ಮತ್ತು 'ಡಿ' ಜಮೀನನ್ನು ಹಿಂಪಡೆದು ಫಾರಂ 50, 53ರ ಅಡಿಯಲ್ಲಿ ಸಕ್ರಮಕ್ಕಾಗಿ ಸಲ್ಲಿಸಿರುವ ಅರ್ಜಿಗಳ ವಿಲೇವಾರಿಗೆ ಅವಕಾಶ ಮಾಡಿಕೊಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

6. **ಶ್ರೀ ವಿ.ಸುನೀಲ್ ಕುಮಾರ್** ಇವರು – ಉಡುಪಿ ಜಿಲ್ಲೆಯ ಕಾರ್ಕಳ ತಾಲೂಕಿನ ನಿಟ್ಟೆ ಸಮುದಾಯ ಆರೋಗ್ಯ ಕೇಂದ್ರದ ನಿರ್ವಹಣೆಯನ್ನು Public Private Partnership ಮಾದರಿಯಲ್ಲಿ ಡಾ॥ ಕೆ.ಎಸ್. ಹೆಗ್ಡೆ ವೈದ್ಯಕೀಯ ಕಾಲೇಜು ನಿಟ್ಟೆ ಇವರಿಗೆ ವಹಿಸಿಕೊಡುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

7. **ಶ್ರೀ ಗೋವಿಂದ ಎಂ. ಕಾರಜೋಳ** ಇವರು – ಬಾಗಲಕೋಟೆ ಜಿಲ್ಲೆಯ ಜಮಖಂಡಿ ತಾಲ್ಲೂಕಿನಲ್ಲಿ ಸಸಾಲಟ್ಟಿ ಏತ ನೀರಾವರಿ ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ ಮಾನ್ಯ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

7. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

ಡಾ|| ನಾರಾಯಣ ಗೌಡ ರವರು – ಮಂಡ್ಯ ಜಿಲ್ಲೆ ಕೆ.ಆರ್. ಪೇಟೆ ತಾಲ್ಲೂಕಿನ ಮುರುಕನ ಹಳ್ಳಿ ಗ್ರಾಮದ ಶ್ರೀ ಹರೀಶ್ ಉ|| ಗುಂಡ ಎಂಬುವವರ ಕೊಲೆಯ ಸಂಬಂಧ ತಾಲ್ಲೂಕಿನಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿರುವ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

ಎಸ್. ಮೂರ್ತಿ
ಕಾರ್ಯದರ್ಶಿ(I/c)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm